**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಖಾಸಗಿ ಅನುದಾನಿತ/ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿ ಮೆಟ್ರಿಕ್ ನಂತರದ ವಿವಿಧ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ/ ಕಡ್ಡಾಯ ಶುಲ್ಕ ಮರುಪಾವತಿಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದಆದೇಶ ಸಂಖ್ಯೆ: ಸಕಇ 322 ಪಕವಿ 2020 ದಿನಾಂಕ:29-08-2020.
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಪತ್ರ ಸಂಖ್ಯೆ: ಸಕನಿ/ಇಡಿ-03/ ಸಿಆರ್-ಮೆ.ನಂ/2019-20 ದಿನಾಂಕ:30-01-2021

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ:(1)ರ ಆದೇಶದಲ್ಲಿ 2018ರ ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಪರಿಷ್ಕೃತ ಮಾರ್ಗಸೂಚಿಯನ್ವಯ 2018-19ನೇ ಸಾಲಿನಿಂದ ಮ್ಯಾನೇಜ್‌ಮೆಂಟ್ ಕೋಟಾದಡಿಯಲ್ಲಿ ಆಯ್ಕೆಯಾದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಕಾಲೇಜು ಶುಲ್ಕಗಳನ್ನು ಪಾವತಿಸಬಾರದೆಂದು ಆದೇಶಿಸಿದೆ. ಅದರಂತೆ, 2018-19ನೇ ಸಾಲಿನ ಪೂರ್ವದ ವರ್ಷಗಳಲ್ಲಿ ಮ್ಯಾನೇಜ್‌ಮೆಂಟ್ ಕೋಟಾದಡಿಯಲ್ಲಿ ಆಯ್ಕೆಯಾಗಿ ವ್ಯಾಸಂಗ ಮುಂದುವರೆಸುತ್ತಿರುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಮಾತ್ರ ಅವರ ಪ್ರಸ್ತುತ ಕೋರ್ಸ್ ಮುಕ್ತಾಯದವರೆಗೆ ಆದೇಶ ಸಂಖ್ಯೆ: ಸಕಇ 288 ಪಕವಿ 2017 ದಿನಾಂಕ: 24-04-2017 ಮತ್ತು ಸರ್ಕಾರದ ಆದೇಶ ಸಂಖ್ಯೆ: ಸಕಇ 205 ಪವಯೋ 2017. ದಿನಾಂಕ: 17-06-2017 ರನ್ವಯ ನಿಗದಿಪಡಿಸಿದ ಶುಲ್ಕ ಪಾವತಿಸಲು ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ:(2)ರಲ್ಲಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರ ಪ್ರಸ್ತಾವನೆಯಲ್ಲಿ 2018-19 ಮತ್ತು 2019-20ನೇ ಸಾಲಿನಲ್ಲಿ ಮ್ಯಾನೇಜ್‌ಮೆಂಟ್ ಕೋಟಾದಡಿಯಲ್ಲಿ ಆಯ್ಕೆಯಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಅವರ ಕೋರ್ಸು ಮುಕ್ತಾಯದವರೆಗೆ ಕೆಲವು ಷರತ್ತುಗಳನ್ನು ಪೂರೈಸುವ ನಿಬಂಧನೆಗೊಳಪಟ್ಟು ವಿದ್ಯಾರ್ಥಿವೇತನವನ್ನು ಪಾವತಿಸಲು ಸರ್ಕಾರಿ ಆದೇಶ ಸಂಖ್ಯೆ: ಸಕಇ 322 ಪಕವಿ 2020, ದಿನಾಂಕ:29-08-2020ಕ್ಕೆ ಸೂಕ್ತ ತಿದ್ದುಪಡಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ, ಸರ್ಕಾರಿ ಆದೇಶ ಸಂಖ್ಯೆ: ಸಕಇ 322 ಪಕವಿ 2020, ದಿನಾಂಕ: 29-08-2020ನ್ನು ಪರಿಷ್ಕರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 322 ಪಕವಿ 2020 ಬೆಂಗಳೂರು ದಿನಾಂಕ: 29-03-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2018-19 ಮತ್ತು 2019-20ನೇ ಸಾಲಿನಲ್ಲಿ ಖಾಸಗಿ ಅನುದಾನಿತ/ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ. 2.50ಲಕ್ಷದೊಳಗೆ ಇರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಆಡಳಿತ ಮಂಡಳಿ ಕೋಟಾದಡಿ ಪ್ರವೇಶ ಪಡೆದಿದ್ದಲ್ಲಿ, ಸದರಿ ವಿದ್ಯಾರ್ಥಿಗಳಿಗೆ ಅವರ ಕೋರ್ಸು

ಮುಕ್ತಾಯವಾಗುವವರೆಗೆ ಈ ಹಿಂದಿನ ವರ್ಷಗಳಲ್ಲಿ ನೀಡಿರುವಂತೆ ಸರ್ಕಾರ / ವಿಶ್ವವಿದ್ಯಾನಿಲಯಗಳು ನಿಗಧಿ ಪಡಿಸಿದ ಕಡ್ಡಾಯ ಶುಲ್ಕ ಸೇರಿದಂತೆ (ಅಭಿವೃದ್ಧಿ ಶುಲ್ಕ ಹೊರತುಪಡಿಸಿ) ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಪಾವತಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಆದೇಶಿಸಿದೆ.

ಷರತ್ತುಗಳು:-

1. ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಪಡೆಯಲು ನಿಗದಿಪಡಿಸಿರುವ ಆದಾಯ ಮಿತಿ ಹಾಗೂ ಇತರೆ ಎಲ್ಲಾ ಅರ್ಹತೆಗಳನ್ನು ಪೂರೈಸತಕ್ಕದ್ದು.
2. ಮ್ಯಾನೇಜ್‌ಮೆಂಟ್ ಕೋಟಾದಡಿ ಸೀಟು ಪಡೆದಿರುವ ವಿದ್ಯಾರ್ಥಿಗಳ ಕುಟುಂಬದ ಆದಾಯವನ್ನು ಮಂಜೂರಾತಿ ಪ್ರಾಧಿಕಾರಿಗಳು ಸುದೀರ್ಘವಾಗಿ ಪರಿಶೀಲಿಸಿ ತದನಂತರ ವಿದ್ಯಾರ್ಥಿವೇತನವನ್ನು ಮಂಜೂರು ಮಾಡತಕ್ಕದ್ದು.
3. ಮ್ಯಾನೇಜ್‌ಮೆಂಟ್ ಕೋಟಾದಡಿ ಡೊನೇಷನ್ ಸೀಟು ಪಡೆದಿರಬಾರದು.
4. ವಿದ್ಯಾರ್ಥಿವೇತನದಲ್ಲಿ ಶುಲ್ಕವನ್ನು ಪಾವತಿ ಮಾಡುವಾಗ ವಿದ್ಯಾರ್ಥಿಯು ವ್ಯಾಸಂಗ ಮಾಡುತ್ತಿರುವ ಕೋರ್ಸಿಗೆ ಸರ್ಕಾರಿ ಸೀಟುಗಳಿಗೆ ನಿಗದಿಪಡಿಸಿದ ಶುಲ್ಕದ ಮೊತ್ತವನ್ನು ಮಾತ್ರ ಪಾವತಿಸತಕ್ಕದ್ದು.

ಈ ಆದೇಶ 2018-19 ಮತ್ತು 2019-20ನೇ ಸಾಲುಗಳಲ್ಲಿ ಪ್ರವೇಶ ಪಡೆದು ಮುಂದುವರೆಯುತ್ತಿರುವ ವಿದ್ಯಾರ್ಥಿಗಳಿಗೆ ಅವರ ಕೋರ್ಸ್ ಮುಗಿಯುವವರೆಗೆ ಮಾತ್ರ ಅನ್ವಯಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
(ಎನ್.ನರಸಿಂಹಮೂರ್ತಿ) 2/3
ಸರ್ಕಾರಅಧೀನಕಾರ್ಯದರ್ಶಿ-1,
ಸಮಾಜಕಲ್ಯಾಣ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಎ ಮತ್ತು ಇ) (ಲೆಕ್ಕಪರಿಶೋಧನೆ-2)ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿ.ಆ.ಸು.ಇ - ಇ-ಆಡಳಿತ, ಬೆಂಗಳೂರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ(ಖಜಾನೆ-2), ಬೆಂಗಳೂರು.
4. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ಬೆಂಗಳೂರು.
7. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ, ಬೆಂಗಳೂರು.
9. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ.
10. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ.
11. ಸಮಾಜ ಕಲ್ಯಾಣ ಇಲಾಖೆಯ ಎಲ್ಲಾ ಜಂಟಿ ನಿರ್ದೇಶಕರು/ ಉಪನಿರ್ದೇಶಕರು.
12. ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳಿಗೆ.

--------3

13. ಸಂಬಂಧಿಸಿದ ಎಲ್ಲಾ ಜಿಲ್ಲಾ/ತಾಲ್ಲೂಕು ಉಪ ಖಜಾನಾಧಿಕಾರಿಗಳು.
14. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಉಪಮುಖ್ಯಮಂತ್ರಿಗಳು, ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಉಪ ಕಾರ್ಯದರ್ಶಿ-1 ಮತ್ತು 2, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.

* * * *